# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ/ ವಾರ್ಡ್ ಸಮಿತಿ/ ಸಹಾಯಕ ಅಭಿಯಂತರರವರ ಕಛೇರಿ, ವಾರ್ಡ್ ಸಂಖ್ಯೆ 192 ಬಿ.ಟಿ.ಎಂ ಬಡಾವಣೆ
16ನೇ ಮುಖ್ಯರಸ್ತೆ, ಬಿ.ಟಿ.,ಎಂ 2ನೇ ಹಂತ, ಬೆಂಗಳೂರು –560076

ದಿನಾಂಕ: 03/11/2022

## ಸಭೆ ತಿಳುವಳಿಕೆ ಪತ್ರ

**ವಿಷಯ:– ದಿನಾಂಕ: 05/11/2022 ರಂದು ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಿರುವ ಬಗ್ಗೆ.**

*****

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ದಕ್ಷಿಣವಲಯದ ವಾರ್ಡ್ ಸಂಖ್ಯೆ:192 ಬಿ.ಟಿ.ಎಂ ಬಡಾವಣೆಯ ವ್ಯಾಪ್ತಿಗೆ ಸಂಬಂಧಿಸಿದಂತೆ ಪ್ರತಿ ಮಾಹೆಯ 1ನೇ ಮತ್ತು 3ನೇ ಶನಿವಾರದಂದು ವಾರ್ಡ್ ಸಮಿತಿ ಸಭೆಯನ್ನು ಕರೆಯಬೇಕಾಗಿದ್ದು, ಅದರಂತೆ ವಾರ್ಡ್ ಸಮಿತಿ ಸಭೆಯನ್ನು ದಿನಾಂಕ: 05/11/2022ರ ಶನಿವಾರದಂದು ಬೆಳಿಗ್ಗೆ 11:00 ಗಂಟೆಗೆ ಕೆಂಪೇಗೌಡ ಆಟದ ಮೈದಾನ 9ನೇ ಮುಖ್ಯರಸ್ತೆ, ವಾಟರ್ ಟ್ಯಾಂಕ್ ಹತ್ತಿರ, ಪಾಲಿಕೆ ಕಛೇರಿಯಲ್ಲಿ ಸಭೆಯನ್ನು ನಿಗದಿಪಡಿಸಲಾಗಿರುತ್ತದೆ ಈ ಸಂಬಂಧ ಸಮಿತಿಯ ಎಲ್ಲಾ ಮಾನ್ಯ ಸದಸ್ಯರುಗಳು ಹಾಗೂ ಕೆಳಕಂಡ ಅಧಿಕಾರಿ/ನೌಕರರ ವರ್ಗದವರು ದಯವಿಟ್ಟು ಸಭೆಗೆ ತಪ್ಪದೆ ಹಾಜರಾಗಿ, ವಾರ್ಡ್ ಅಭಿವೃದ್ಧಿ ಹಾಗೂ ಕುಂದುಕೊರತೆಗಳ ಬಗ್ಗೆ ಮುಕ್ತವಾಗಿ ಚರ್ಚಿಸಿ ಅಮೂಲ್ಯ ಸಲಹೆ ಸೂಚನೆಗಳನ್ನು ನೀಡಲು ಕೋರಿದೆ ಮತ್ತು ಅಧಿಕಾರಿ/ನೌಕರರು ತಮ್ಮ ಇಲಾಖೆಗಳಿಗೆ ಸಂಬಂಧಿಸಿದ ಮಾಹಿತಿಗಳೊಂದಿಗೆ ಹಾಜರಾಗಲು ಕೋರಿದೆ.

**ಸಭೆಯಲ್ಲಿ ಚರ್ಚಿಸತಕ್ಕ ವಿಷಯಗಳು:–** 1) ಘನತ್ಯಾಜ್ಯ ನಿರ್ವಹಣೆ ಬಗ್ಗೆ 2) ಕುಡಿಯುವ ನೀರು ಮತ್ತು ಒಳಚರಂಡಿ ಕುಂದುಕೊರತೆ 3) ಮಳೆಯಿಂದ ಸಂಭವಿಸಬಹುದಾದ ಅನಾಹುತಗಳು ಬಗ್ಗೆ 4) ವಾರ್ಡ್ ವ್ಯಾಪ್ತಿಯ ಪ್ರಸ್ತುತ ಕಾಮಗಾರಿಗಳ ನಿರ್ವಹಣೆ ಬಗ್ಗೆ 5) ಬೀದಿ ದೀಪಗಳ ನಿರ್ವಹಣೆ ಬಗ್ಗೆ ಕ್ರಮ ಕಯಗೊಳ್ಳುವ ಬಗ್ಗೆ

3/11/2022
ಕಾರ್ಯದರ್ಶಿಗಳು,
ವಾರ್ಡ್ ಸಂಖ್ಯೆ:192, ಬಿ.ಟಿ.ಎಂ ಬಡಾವಣೆ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

ರವರಿಗೆ :–

1) **ನೋಡಲ್ ಅಧಿಕಾರಿರವರು**/ ಮಾನ್ಯ ಅಧ್ಯಕ್ಷರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2) ಸಹಾಯಕ ಕಾರ್ಯಪಾಲಕ ಅಭಿಯಂತರರು(ಬಿಟಿಎಂ)ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
3) ಸಹಾಯಕ ಕಾರ್ಯಪಾಲಕ ಅಭಿಯಂತರರು(ಘ.ತ್ಯಾ.ನಿ.ಅ.ಬಿಟಿಎಂ)ವಿಭಾಗ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
4) ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಅಧಿಕಾರಿಗಳ ಮಾಹಿತಿಗಾಗಿ ಸಲ್ಲಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು ಬೆಸ್ಕಾಂ ಉಪ ವಿಭಾಗ ಎಸ್–16 ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
6) ಸಹಾಯಕ ಕಾರ್ಯಪಾಲಕ ಅಭಿಯಂತರರು ಉಪ ವಿಭಾಗ ಎಸ್–6 ಬೆಂಗಳೂರು ನೀರುಸರಬರಾಜು ಮಂಡಳಿ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
7) ತೋಟಗಾರಿಕೆ ಅಧೀಕ್ಷಕರು (ದಕ್ಷಿಣ) ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
8) ಆರೋಗ್ಯ ವೈದ್ಯಾಧಿಕಾರಿಗಳು/ಹಿರಿಯ ಆರೋಗ್ಯ ಪರಿವೀಕ್ಷಕರು/ಕಿರಿಯ ಆರೋಗ್ಯ ಪರಿವೀಕ್ಷಕರು ಬಿ.ಟಿ.ಎಂ ಲೇಔಟ್ ವಿಭಾಗದವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾ
9)
10) ಗಲು ಕೋರಲಾಗಿದೆ.
11) ಸಹಾಯಕ ಕಂದಾಯ ಅಧಿಕಾರಿಗಳು ಬಿ.ಟಿ.ಎಂ ಉಪ ವಿಭಾಗ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.3
12) ಸಹಾಯಕ ಕಾರ್ಯಪಾಲಕ ಅಭಿಯಂತರರು ವಿದ್ಯುತ್ ಉಪವಿಭಾಗ ದಕ್ಷಿಣ ವಲಯ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.

Scanned with OKEN Scanner

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಬಿ.ಟಿ.ಎಂ ಲೇಔಟ್ ಉಪ-ವಿಭಾಗದ ವಾರ್ಡ್ ಸಂಖ್ಯೆ-192 ಬಿ.ಟಿ.ಎಂ ಬಡಾವಣೆ ಕಛೇರಿಯಲ್ಲಿ ದಿನಾಂಕ: 05.11.2022 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ಪರಿಣಾಮಕಾರಿಯಾಗಿ ಸೇವೆಗಳನ್ನು ಒದಗಿಸುವ ನಿಟ್ಟಿನಲ್ಲಿ ಪಾಲಿಕೆಯ ವಾರ್ಡ್ ಹಂತದಲ್ಲಿ ಸಮಿತಿಗಳನ್ನು ರಚಿಸುವ ಸಲುವಾಗಿ ಮಾನ್ಯ ವಲಯ ಆಯುಕ್ತರು, ಬಿ.ಬಿ.ಬಿ.ಎಂ.,ರವರ ಕಛೇರಿ ಆದೇಶದ ಸಂಖ್ಯೆ:ವ.ಆ(ದ)/ಪಿಆರ್/458/2022-23, ದಿನಾಂಕ:13-07-2022ರ ಆದೇಶದಂತೆ ನೋಡೆಲ್ ಅಧಿಕಾರಿಯನ್ನಾಗಿ ಶ್ರೀ.ಸಂತೋಷ್, ಸ.ಕಾನಿ.ಅ ಘನತ್ಯಾಜ್ಯ ಬಿ.ಬಿ.ಎಂಪಿ.ರವನ್ನು ನೇಮಿಸಲಾಗಿ, ಇವರನ್ನು ವಾರ್ಡ್ ಮಟ್ಟದಲ್ಲಿ ಸಾರ್ವಜನಿಕರಿಗೆ ಪ್ರಮುಖವಾದ ಮೂಲಭೂತ ಸೌಕರ್ಯಗಳಾದ ಘನತ್ಯಾಜ್ಯ ವಸ್ತುಗಳ ನಿರ್ವಹಣೆ, ಸಾರ್ವಜನಿಕ ಆರೋಗ್ಯ, ಶಿಕ್ಷಣ, ನಗರದ ಸ್ವಚ್ಛತೆ, ರಸ್ತೆ ನಿರ್ವಹಣೆ/ನಿರ್ಮಾಣ, ಬೀದಿ ದೀಪಗಳ ನಿರ್ವಹಣೆ, ನೀರು ಸರಬರಾಜು ಮತ್ತು ಒಳಚರಂಡಿ ಮತ್ತು ಇನ್ನಿತರ ಕಲ್ಯಾಣ ಕಾರ್ಯಕ್ರಮಗಳಂತಹ ಹಲವಾರು ಸೌಲಭ್ಯಗಳನ್ನು ಪರಿಣಾಕಾರಿಯಾಗಿ ಒದಗಿಸುವ ನಿಟ್ಟಿನಲ್ಲಿ ಮತ್ತು ಪಾಲಿಕೆಯ ಹಾಗೂ ಸಾರ್ವಜನಿಕರ ನಡುವೆ ಸಮನ್ವಯ ಸಾಧಿಸುವ ನಿಟ್ಟಿನಲ್ಲಿ ಪಾಲಿಕೆಯ ವಾರ್ಡ್ ಹಂತದಲ್ಲಿ ಸಮಿತಿ ಸಭೆಗೆ ಈ ಕೆಳಕಂಡ ಅಧಿಕಾರಿ ವರ್ಗ/ ಸದಸ್ಯರು ಮತ್ತು ಸ್ಥಳೀಯ ನಾಗರೀಕರು ಹಾಜರಾಗಿದ್ದರು.

**ಸಭೆಗೆ ಹಾಜರಿದ್ದ ಅಧಿಕಾರಿ/ಸದಸ್ಯರುಗಳ ವಿವರ**

| ಕ್ರ.ಸಂ. | ಹೆಸರು | ಮೊಬೈಲ್ ಸಂಖ್ಯೆ |
|---|---|---|
| 1 | ಶ್ರೀಸಂತೋಷ್.ಸ.ಕಾ.ನಿ.ಅ ಘನತ್ಯಾಜ್ಯ ಬಿ.ಟಿ.ಎಂ ವಿಭಾಗ | 9480683475 |
| 2 | ಶ್ರೀ.ನರೇಶ್‌ಕುಮಾರ್.ಕೆ ಸ.ಇಂ-192 ವಾರ್ಡ್ | 9844407499 |
| 3 | ಶ್ರೀ.ಮಲ್ಲಿಕಾರ್ಜುನ್ ಹಿರಿಯ ಆರೋಗ್ಯ ಪರಿವೀಕ್ಷಕರು | 9740660072 |
| 4 | ಶ್ರೀ. ಪ್ರಹ್ಲಾದ್,ಕಿರಿಯ ಆರೋಗ್ಯಾ ಪರಿವೀಕ್ಷಕರು | 9972320005 |
| 5 | ಶ್ರಿ. ಮುನಿರಾಜು ಸ್ಯಾನಟರಿ ದಫೇದಾರ | 9844884555 |
| 6 | ಶ್ರೀ.ಸತ್ಯನಾರಯಣ ಎಂ ಗ್ಯಾಂಗ್‌ಮೆನ್ | 9686404846 |
| 7 | ಶ್ರೀ.ಶರಣಪ್ಪ ಮಾರ್ಷಲ್ | 7483316635 |
| 8 | ಶ್ರೀ ಸೂರ್ಯ ಕಿರಿಯ ಆರೋಗ್ಯಾ ಪರಿವೀಕ್ಷಕರು:2 | 9901238214 |
| 9 | ಶ್ರೀ.ಚಿಟ್ಟಿ, ಮೇಲ್ವಿಚಾರಕರು | 9844485981 |
| 10 | ಶ್ರೀ ನರಸಿಂಹ, ಮೇಲ್ವಿಚಾರಕರು | 9901261905 |
| 11 | ಶ್ರೀ.ಕೀರ್ತಿ , ನಾಗರೀಕರು | 9342314102 |
| 12 | ಶ್ರೀಮತಿ. ಎಂ.ಕೆ.ಪುಷ್ಪಿತಾ | 7760532433 |
| 13 | ಶ್ರೀ.ಎಂ.ಕೃಷ್ಣಪ್ಪ ನಾಗರೀಕರು | 9740145923 |
| 14 | ಶ್ರೀ.ಬಿ.ಎನ್.ಆನಂದ ಕೆಲಸ ಪರಿವೀಕ್ಷರು BWSSB | 7899213659 |

* * * * * *

ದಿನಾಂಕ 05-11-2022 ರಂದು ಬೆಳಿಗ್ಗೆ 11.00 ಗಂಟೆಗೆ ನಡೆಸಲಾದ ವಾರ್ಡ್ ಮಟ್ಟದ ಸಾರ್ವಜನಿಕರ ಕುಂದು ಕೊರತೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ನಿರ್ವಹಿಸುವ ಸಂಬಂಧ ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲಾಗಿ ಮೊದಲಿಗೆ ಹಾಜರಿದ್ದ, ಅದ್ಯಕ್ಷರಿಗೆ ಸ್ವಾಗತವನ್ನು ಕೋರುತ್ತಾ ಹಾಗೂ ಸಭೆಗೆ ಹಾಜರಾದ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರಿಗೆ ಮತ್ತು ಸ್ಥಳೀಯ ನಾಗರಿಕರಿಗೆ ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

ಸಭೆಯನ್ನು ಪ್ರಾರಂಭಿಸುತ್ತಾ, ಸದರಿ ವಾರ್ಡ್‌ನ ಎಲ್ಲಾ ಕುಂದುಕೊರತೆಗಳನ್ನು ಇಲಾಖೆವಾರು ಚರ್ಚಿಸಿ ಬಗೆಹರಿಸಿಕೊಳ್ಳಲು ಅಧ್ಯಕ್ಷರು ಸಲಹೆಯನ್ನು ನೀಡಿರುತ್ತಾರೆ. ಈ ಕುರಿತಂತೆ ಈ ಕೆಳಕಂಡ ವಿಷಯಗಳನ್ನು ಸಂಕ್ಷಿಪ್ತವಾಗಿ ಚರ್ಚಿಸಿ ಪರಿಹರಿಸುವ ಬಗ್ಗೆ ಕೈಗೊಳ್ಳುವ ಕ್ರಮಗಳ ಬಗ್ಗೆ ಅಧಿಕಾರಿಗಳಿಗೆ ನಿರ್ದೇಶನವನ್ನು ನೀಡಲಾಯಿತು.



Scanned with OKEN Scanner

**ರಸ್ತೆ ಅಗೆತಗಳು ಮತ್ತು ರಸ್ತೆಗುಂಡಿಗಳ ನಿರ್ವಹಣೆ ಮಾಡುವ ಬಗ್ಗೆ:**

ಸಭೆಗೆ ಹಾಜರಿದ್ದ ಎಲ್ಲಾ ಸದಸ್ಯರು ಕ್ರಮವಾಗಿ ಮಾತನಾಡಿ ಬಿ.ಟಿ.ಎಂ ಬಡಾವಣೆಯ ಅನೇಕ ರಸ್ತೆಗಳಲ್ಲಿ ಓ.ಎಫ್.ಸಿ ಕೇಬಲ್ ಅಳವಡಿಸಲು ರಸ್ತೆಯನ್ನು ಅಗೆದಿದ್ದು, ಸರಿಯಾಗಿ ರಸ್ತೆಯನ್ನು ಯಥಾಸ್ಥಿತಿಗೆ ತರುವಲ್ಲಿ ವಿಫಲರಾಗಿದ್ದು, ಈಗಾಗಲೇ ಡಾಂಬರೀಕರಣ ಕಾಮಗಾರಿಯು ಪ್ರಗತಿಯಲ್ಲಿದ್ದು, ವೈಜ್ಞಾನಿಕವಾಗಿ ಡಾಂಬರೀಕರಣ ಮಾಡಲು ಕೋರಿದರು

ಕ್ರಮ: ಸಹಾಯಕ ಕಾರ್ಯಪಾಲಕ ಅಭಿಯಂತರರು ಬಿ.ಟಿ.ಎಂ ಲೇಔಟ್ ಉಪವಿಭಾಗ

**ಘನತ್ಯಾಜ್ಯ ನಿರ್ವಹಣೆ ಮಾಡುವ ಬಗ್ಗೆ:-**

ಸಭೆಗೆ ಹಾಜರಿದ್ದ ಎಲ್ಲಾ ಸದಸ್ಯರು ಕ್ರಮವಾಗಿ ಮಾತನಾಡಿ ಬಿ.ಟಿ.ಎಂ ಬಡಾವಣೆಯ ಅನೇಕ ರಸ್ತೆಗಳಲ್ಲಿ ಎಲ್ಲೆಂದರಲ್ಲಿ ಕಸದ ರಾಶಿಗಳು ಮರದ ಕೊಂಬೆ ರಂಬೆಗಳು ಬಿದ್ದಿದ್ದು, ಸುಮಾರು ದಿನಗಳಿಂದ ಸರಿಯಾಗಿ ಘನತ್ಯಾಜ್ಯ ನಿರ್ವಹಣೆಯಾಗುತ್ತಿಲ್ಲವೆಂದು ಹಾಗೂ ಮನೆ ಮನೆಗಳಿಂದ ಕಸ ಸಂಗ್ರಹಿಸಲು ಸರಿಯಾಗಿ ಆಟೋ ಟಿಪ್ಪರ್‌ಗಳು ಬರುತ್ತಿಲ್ಲವೆಂದು ಮತ್ತು ಖಾಲಿ ನಿವೇಶನಗಳಲ್ಲಿ ಕಸದ ರಾಶಿಗಳು ಹಾಗೆಯೇ ಇದೆ ಎಂದು ಈ ಹಿಂದೆ ತಿಳಿಸಲಾಗಿದ್ದು, ಕೆಲವು ಪ್ರದೇಶಗಳಲ್ಲಿ ಉತ್ತಮ ನಿರ್ವಹಣೆಯಾಗುತ್ತಿದೆ ಎಂದು ತಿಳಿಸಿದರು.

ಕ್ರಮ: ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ಸಂಖ್ಯೆ 192 ಮತ್ತು ಸಹಾಯಕ ಕಾರ್ಯಪಾಲಕ ಅಭಿಯಂತರರು ಘ.ತ್ಯಾನಿ ಬಿ.ಟಿ.ಎಂ ವಲಯ

**ಅವಶ್ಯಕ ಕಾಮಗಾರಿಗಳು ನಿರ್ವಹಿಸುವ ಬಗ್ಗೆ.**

ಸಭಾಧ್ಯಕ್ಷರು ಮಾತನಾಡಿ ವಾರ್ಡ್ ವ್ಯಾಪ್ತಿಯ ತೆರೆದ ಚರಂಡಿಗಳು ಮತ್ತು ಮುಖ್ಯ ಚರಂಡಿಗಳಲ್ಲಿ ಹೂಳು ತುಂಬದಂತೆ ಸಿಲ್ಟ್ & ಟ್ರಾಕ್ಟರ್ ಸಿಬ್ಬಂದಿಗಳನ್ನು ಉಪಯೋಗಿಸಿಕೊಂಡು ಹೂಳನ್ನು ತೆಗೆಯಲು ಸೂಚಿಸಿದರು ಹಾಗೂ ವಾರ್ಡ್‌ನ ಎಲ್ಲಾ ರಸ್ತೆಯ ಚರಂಡಿಗಳಲ್ಲಿ ಹೂಳನ್ನು ತೆಗೆದು ಅಭಿವೃದ್ಧಿಪಡಿಸುವಂತೆ ಕೋರಿದರು.

ಈ ಬಗ್ಗೆ ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ 192 ರವರು ಮಾತನಾಡಿ ಈಗಾಗಲೇ ಅಮೃತ ನಗರೋತಾನ ಯೋಜನೆ ಅಡಿಯಲ್ಲಿ ವಾರ್ಡ್‌ಗೆ ಸಂಬಂಧಿಸಿದ ಸುಮಾರು 80% ರಷ್ಟು ರಸ್ತೆಗಳ ಚರಂಡಿಗಳನ್ನು ಅಭಿವೃದ್ಧಿಪಡಿಸಲು ಕಾಮಗಾರಿಯನ್ನು ಕೈಗೆತ್ತುಕೊಂಡಿದ್ದು, ಕೆಲವು ದಿನಗಳಲ್ಲೇ ಕಾಮಗಾರಿಯು ಪ್ರಾರಂಭವಾಗುವುದೆಂದು ಸಭೆಗೆ ತಿಳಿಸಿದರು.

**ಕೋವಿಡ್ ನಿರ್ವಹಣೆ ಮಾಡುವಬಗ್ಗೆ.**

ಸಭಾಧ್ಯಕ್ಷರು ಮಾತನಾಡಿ, ಮಾರ್ಷಲ್ ರವರಿಗೆ ಮಹಾಮಾರಿ ಕೊರೋನ ರೋಗ ನಾಲ್ಕನೇ ಅಲೆಯ ರೋಗ ಹರಡದಂತೆ ತಡೆಯಲು ಮುಂಜಾಗ್ರತ ಕ್ರಮವಾಗಿ ವಾರ್ಡ್ ವ್ಯಾಪ್ತಿಯಲ್ಲಿ ಯಾವುದೇ ಸಭೆ, ಸಮಾರಂಭಗಳು ನಡೆದರೆ ತಪಾಸಣೆ ಮಾಡಿ, ಪರವಾನಿಗೆ ಇಲ್ಲದಿದ್ದರೆ ಪರಿಶೀಲಿಸಿ ಅಂತಹ ಸಮಾರಂಭಗಳನ್ನು ಸ್ಥಗಿತಗೊಳಿಸತಕ್ಕದ್ದು, ಮತ್ತು ಕಡ್ಡಾಯವಾಗಿ ಮಾಸ್ಕ್ ದರಿಸುವುದು ಸಾಮಾಜಿಕ ಅಂತರ ಕಾಯ್ದುಕೊಳ್ಳಲು ಮಾರ್ಗಸೂಚಿಗಳನ್ನು ಅಳವಡಿಸಿಕೊಳ್ಳಲು ಜಾಗೃತಿ ಮೂಡಿಸಬೆಕು ಹಾಗೂ ಮಾಸ್ಕ ದರಿಸದೇ ಇದ್ದವರಿಗೆ ದಂಡ ವಸೂಲಿ ಮಾಡಲು ಸಭೆಯಲ್ಲಿ ಹಾಜರಿದ್ದು ವಾರ್ಡ್ ಸದಸ್ಯರು ರವರಿಗೆ ಸೂಚಿಸಿದರು.

**ಸೊಳ್ಳೆ ಔಷಧಿ ಸಿಂಪಡಣೆ ಮಾಡುವಬಗ್ಗೆ.**

ಸಭೆಗೆ ಹಾಜರಿದ್ದ ಸದಸ್ಯರು ಮಾತನಾಡಿ ವಾರ್ಡ್‌ವ್ಯಾಪ್ತಿಯಲ್ಲಿನ ಉದ್ಯಾನವನ ಹಾಗೂ ಆಟದ ಮೈದಾನದ ಆವರಣದಲ್ಲಿ ಸೊಳ್ಳೆಗುಳು ಹೆಚ್ಚಾಗಿ ಅಲ್ಲಿ ವಾಯುವಿಹಾರಕ್ಕೆ ಬರುವ ಜನರಿಗೆ ಮತ್ತು ವೃದ್ಧರಿಗೆ ತುಂಬ ತೊಂದರೆಯಾಗುತ್ತಿದ್ದು, ಹಾಲಿ ಮಳೆಗಾಲವಿರುವುದರಿಂದ ಸೊಳ್ಳೆಗಳು ಹೆಚ್ಚಾಗಿ ಉತ್ಪತ್ತಿಯಾಗುತ್ತಿರುತ್ತದೆ. ಈ ಸಂಬಂಧ ಪ್ರತಿ ವಾರದ 1 ದಿನದಂತೆ ಸೊಳ್ಳೆಗಳ ನಿಯಂತ್ರಣಕ್ಕೆ ಫಾಗಿಂಗ್ ಮಾಡುವುದು ಮತ್ತು ಸೊಳ್ಳೆ ಔಷದಿ ಸಿಂಪಡಣೆ ಮಾಡಬೇಕೆಂದು ಸಭೆಗೆ ತಿಳಿಸಿದರು.



Scanned with OKEN Scanner

ಕೊನೆಯದಾಗಿ ಈ ಮೇಲ್ಕಂಡ ಎಲ್ಲಾ ವಿಷಯಗಳನ್ನು ಹಾಗೂ ಸಮಸ್ಯೆಗಳನ್ನು ಬರುವ ಮುಂದಿನ ಸಭೆಯೊಳಗಾಗಿ ನಿವಾರಣೆ ಮಾಡಿ ಅನುಪಾಲನೆ ವರದಿಯನ್ನು ಸಂಬಂಧಪಟ್ಟ ಅಧಿಕಾರಿಗಳು ಕಳುಹಿಸಿಕೊಡಬೇಕಾಗಿ ಈ ಮೂಲಕ ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು

5/11/2022
ಕಾರ್ಯದರ್ಶಿಗಳು,
ವಾರ್ಡ್ ಸಂಖ್ಯೆ:192, ಬಿ.ಟಿ.ಎಂ ಬಡಾವಣೆ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

<u>ಪ್ರತಿಯನ್ನು:</u>

1. ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರ ಅವಗಾಹನೆಗೆ ಸಲ್ಲಿಸಿದೆ.
4. ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
5. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
6. ಅಧೀಕ್ಷಕ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ಕಾರ್ಯಪಾಲಕ ಅಭಿಯಂತರರು, ಬಿ.ಟಿ.ಎಂ.ಲೇಔಟ್ ವಿಭಾಗರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಮುಂದಿನ ಕ್ರಮಕ್ಕೆ
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲಮಂಡಳಿ, ಬಿ.ಟಿ.ಎಂ ರವರಿಗೆ ಮುಂದಿನ ಕ್ರಮಕ್ಕೆ

Scanned with OKEN Scanner